# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 22
2. ಸದಸ್ಯರ ಹೆಸರು : ಶ್ರೀ ಕೆ.ಅಬ್ದುಲ್ ಜಬ್ಬರ್(ವಿಧಾನ ಸಭೆಯಿಂದ ಚುನಾಯಿತರಾದವರು)
3. ಉತ್ತರಿಸುವ ದಿನಾಂಕ : 13.02.2023
4. ಉತ್ತರಿಸುವ ಸಚಿವರು : ಮಾನ್ಯ ಗೃಹ ಸಚಿವರು

| ಕ್ರಸ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ನಡೆದ ಮತೀಯ ಸಂಘರ್ಷ/ ಗಲಭೆ ಪ್ರಕರಣಗಳ ಸಂಖ್ಯೆ ಎಷ್ಟು? (ಸಂಪೂರ್ಣ ಮಾಹಿತಿ ನೀಡುವುದು) | ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಮತೀಯ ಸಂಘರ್ಷ/ ಗಲಭೆ ಪ್ರಕರಣಗಳು ದಾಖಲಾಗಿರುತ್ತವೆ. ವರ್ಷವಾರು ಹಾಗೂ ಜಿಲ್ಲಾವಾರು ಮಾಹಿತಿ ಕೆಳಗಿನಂತಿದೆ. |

| ಕ್ರಸ | ಜಿಲ್ಲೆ | ವರ್ಷ | | | |
|---|---|---|---|---|---|
| | | **2020** | **2021** | **2022** | **2023** |
| 1 | ಹುಬ್ಬಳ್ಳಿ-ಧಾರವಾಡ ನಗರ | 0 | 1 | 1 | 0 |
| 2 | ಮಂಗಳೂರು ನಗರ | 0 | 0 | 2 | 0 |
| 3 | ಕೊಡಗು | 0 | 3 | 3 | 0 |
| 4 | ಶಿವಮೊಗ್ಗ | 12 | 1 | 11 | 0 |
| 5 | ದಾವಣಗೆರೆ | 0 | 2 | 16 | 0 |
| 6 | ಧಾರವಾಡ | 0 | 0 | 1 | 0 |
| 7 | ಹಾವೇರಿ | 3 | 3 | 4 | 0 |
| 8 | ಕಲಬುರಗಿ ಜಿಲ್ಲೆ | 0 | 0 | 8 | 0 |
| 9 | ಕೋಲಾರ | 0 | 1 | 3 | 1 |
| 10 | ತುಮಕೂರು | 0 | 7 | 0 | 0 |
| 11 | ಉತ್ತರ ಕನ್ನಡ | 0 | 4 | 7 | 0 |
| 12 | ದಕ್ಷಿಣ ಕನ್ನಡ | 3 | 3 | 7 | 0 |
| | **ಒಟ್ಟು** | **18** | **25** | **63** | **1** |

| ಕ್ರಸ | ಪ್ರಶ್ನೆ | ಉತ್ತರ |
|---|---|---|
| ಆ | ಈ ರೀತಿಯ ಗಲಭೆಗಳಲ್ಲಿ ಮೃತ/ ಹತ್ಯೆಯಾದವರೆಷ್ಟು? (ವಿವರವಾದ ಮಾಹಿತಿ ನೀಡುವುದು) | ಈ ರೀತಿಯ ಗಲಭೆಗಳಲ್ಲಿ ಮೃತ/ ಹತ್ಯೆಯಾದವರ ವಿವರ ಕೆಳಗಿನಂತಿದೆ. |

| ಕ್ರಸ | ಘಟಕ | ಪೊಲೀಸ್ ಠಾಣೆ ಪ್ರಕರಣ ಸಂಖ್ಯೆ ಮತ್ತು ಕಲಂ | ಮೃತ/ ಹತ್ಯೆಯಾದವರ ವಿವರ |
|---|---|---|---|
| 1 | ಶಿವಮೊಗ್ಗ ಜಿಲ್ಲೆ | ದೊಡ್ಡಪೇಟೆ ಠಾಣೆ 77/2022 ಕಲಂ 143, 147, 148, 120 (ಬಿ) 302 ಸಹಿತ 149 ಐಪಿಸಿ & 25 (1) (ಬಿ) ಆರ್ಮ್ಸ್ ಆಕ್ಟ್ 16, 18, 20, ಯುಎಪಿಎ 1967 ಆಕ್ಟ್ | ಹರ್ಷ @ ಹಿಂದು ಹರ್ಷ ಬಿನ ನಾಗರಾಜ |

<table>
<tr>
<td>ಇ</td>
<td>ಮೃತರ ಕುಟುಂಬಗಳಿಗೆ ಸರ್ಕಾರದ ವತಿಯಿಂದ ಪರಿಹಾರ ನೀಡಲಾಗಿದೆಯೇ? ಹಾಗಿದ್ದಲ್ಲಿ ಎಷ್ಟು ಪ್ರಕರಣಗಳಲ್ಲಿ ಪರಿಹಾರ ಒದಗಿಸಲಾಗಿದೆ? ಪರಿಹಾರ ನೀಡದಿರುವ ಪ್ರಕರಣಗಳೆಷ್ಟು? (ಸಂಪೂರ್ಣ ವಿವರ ನೀಡುವುದು)</td>
<td>ಸರ್ಕಾರದ ವತಿಯಿಂದ 01 ಪ್ರಕರಣದಲ್ಲಿ ಮೃತರ ಕುಟುಂಬಕ್ಕೆ ಪರಿಹಾರ ನೀಡಲಾಗಿದೆ. ಮಾಹಿತಿ ಕೆಳಗಿನಂತಿದೆ.
<table>
<tr><th>ಕ್ರಸ</th><th>ಘಟಕ</th><th>ಪೊಲೀಸ್ ಠಾಣೆ ಪ್ರಕರಣ ಸಂಖ್ಯೆ ಮತ್ತು ಕಲಂ</th><th>ಪರಿಹಾರದ ವಿವರ</th></tr>
<tr><td>1</td><td>ಶಿವಮೊಗ್ಗ ಜಿಲ್ಲೆ</td><td>ದೊಡ್ಡಪೇಟೆ ಪೊಲೀಸ್ ಠಾಣೆ ಮೊಕದ್ದಮೆ ಸಂಖ್ಯೆ: 77/2022 ಕಲಂ 143, 147, 148, 120 (ಬಿ) 302 ಸಹಿತ 149 ಐಪಿಸಿ& 25 (1) (ಬಿ) ಆರ್ಮ್ಸ್ ಆಕ್ಟ್ 16, 18, 20, ಯುಎಪಿಎ 1967 ಆಕ್ಟ್</td><td>ರಾಜ್ಯ ಸರ್ಕಾರದಿಂದ ಮೃತರ ಕುಟುಂಬಕ್ಕೆ ರೂಪಾಯಿ 25 ಲಕ್ಷ ಪರಿಹಾರ ಹಣವನ್ನು ನೀಡಲಾಗಿರುತ್ತಾರೆ.</td></tr>
</table>
</td>
</tr>
<tr>
<td>ಈ</td>
<td>ರಾಜ್ಯದ ಕೆಲವು ಜಿಲ್ಲೆಗಳಲ್ಲಿ ನಿರಂತರವಾಗಿ ಮತೀಯ ಸಂಘರ್ಷ/ ಗಲಭೆಗಳು ನಡೆಯುತ್ತಿದ್ದರೂ ಸಹ ಇದನ್ನು ತಡೆಗಟ್ಟುವ ನಿಟ್ಟಿನಲ್ಲಿ ಸರ್ಕಾರದ ವೈಫಲ್ಯಗಳು ಕಂಡು ಬರುತ್ತಿದ್ದು, ಈ ಕುರಿತು ಸಾರ್ವಜನಿಕರಿಂದ ದೂರುಗಳು ಬಂದಿದೆಯೇ?</td>
<td>ಮತೀಯ ಸಂಘರ್ಷ/ಗಲಭೆಗಳ ಸಂಬಂಧ ವೈಫಲ್ಯಗಳ ಕುರಿತು ಸಾರ್ವಜನಿಕರಿಂದ ಯಾವುದೇ ದೂರುಗಳು ಬಂದಿರುವುದಿಲ್ಲ.</td>
</tr>
<tr>
<td>ಉ</td>
<td>ನಿರಂತರವಾಗಿ ನಡೆಯುತ್ತಿರುವ ಮತೀಯ ಸಂಘರ್ಷ/ ಗಲಭೆಗಳನ್ನು ತಡೆಯುವ ನಿಟ್ಟಿನಲ್ಲಿ ಸರ್ಕಾರವು ಕೈಗೊಂಡಿರುವ ಕ್ರಮಗಳೇನು?</td>
<td>ರಾಜ್ಯದಲ್ಲಿ ಮತೀಯ ಗಲಭೆಯನ್ನು ತಡೆಯಲು ಮತ್ತು ಕಾನೂನು ಸುವ್ಯವಸ್ಥೆಯನ್ನು ಕಾಪಾಡಲು ಪೊಲೀಸ್ ಇಲಾಖಾ ವತಿಯಿಂದ ಯಾವಾಗಲು ಪ್ರಾಮಾಣಿಕವಾಗಿ ಪ್ರಯತ್ನ ಮಾಡಲಾಗುತ್ತಿದೆ. ಈ ಕುರಿತು ಈ ಕಳಗಿನಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗಿದೆ.<br>
➢ ಕೋಮು ಗಲಭೆಗಳು ನಡೆಯದಂತೆ ಕೋಮು ಅತಿ ಸೂಕ್ಷ್ಮ ಪ್ರದೇಶಗಳನ್ನು ಗುರುತಿಸಿ ಅಂತಹ ಪ್ರದೇಶಗಳಲ್ಲಿ ಸೂಕ್ತ ಪೊಲೀಸ್ ಬಂದೋಬಸ್ತ್ ಮಾಡಲಾಗುತ್ತಿರುತ್ತದೆ.<br>
➢ ಕೋಮು ಸೌಹರ್ದತೆಗೆ ಧಕ್ಕೆ ತರುವಂತಹ ಬಾಕಿ ಇರುವ ವಿವಾದಗಳನ್ನು ಗುರುತಿಸಿ ಅವುಗಳನ್ನು ಬಗೆಹರಿಸಲು ಜಿಲ್ಲಾಡಳಿತ ವತಿಯಿಂದ ಅಗತ್ಯ ಕ್ರಮ ವಹಿಸಲಾಗುತ್ತಿರುತ್ತದೆ.<br>
➢ ಕೋಮು ಅತಿ ಸೂಕ್ಷ್ಮ ಪ್ರದೇಶಗಳಲ್ಲಿ ಅನ್ಯ ಕೋಮಿನ ಜನರು ಯಾವುದಾದರೂ ಮೆರವಣಿಗೆ ಹಾಗೂ ಇನ್ನಿತರೆ ಕಾರ್ಯಕ್ರಮಗಳನ್ನು ನಡೆಸುವ ವೇಳೆ ಕೋಮು ಭಾವನೆಗಳಿಗೆ ಧಕ್ಕೆಯಾಗದಂತೆ ಎಲ್ಲಾ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿರುತ್ತದೆ.<br>
➢ ಠಾಣಾ ವ್ಯಾಪ್ತಿಯಲ್ಲಿ ಶಾಂತಿ ಸಭೆ, ಯುವಜನ ಸಭೆ, ಮೊಹಲ್ಲ ಮಿಟಿಂಗ್, ನಾಗರೀಕ ಸಮಿತಿ ಸಭೆಗಳನ್ನು ನಡೆಸಿ ಸಾರ್ವಜನಿಕರಿಗೆ ಮತ್ತು ಯುವಕರಿಗೆ ತಿಳುವಳಿಕೆಗಳನ್ನು ನೀಡಲಾಗುತ್ತಿದೆ ಹಾಗೂ ವೃತ್ತ ಉಪ ವಿಭಾಗ, ಜಿಲ್ಲಾ ಮಟ್ಟದಲ್ಲಿಯೂ ಸಹ ಸಭೆಗಳನ್ನು ಕೈಗೊಳ್ಳಲಾಗುತ್ತಿದೆ.<br>
➢ ಕಾನೂನು ಮತ್ತು ಸುವ್ಯವಸ್ಥೆಗೆ ಭಂಗ ತರುವ ವ್ಯಕ್ತಿಗಳು/ ಸಂಘಟನೆಗಳು/ಸಾಮಾಜಿಕ ಜಾಲತಾಣಗಳ ಬಗ್ಗೆ ಸತತ ನಿಗಾ ಇಡಲಾಗಿದೆ.<br>
➢ ಠಾಣಾ ವ್ಯಾಪ್ತಿಯಲ್ಲಿ ರಾತ್ರಿ ಬೀಟ್ ಮತ್ತು ಶುಭೋದಯ (ಗುಡ್ ಮಾರ್ನಿಂಗ್) ಬೀಟುಗಳನ್ನು ಕೈಗೊಳ್ಳಲಾಗಿದೆ. ಏಕ ಕಾಲದಲ್ಲಿ ಜಿಲ್ಲಾ ವ್ಯಾಪ್ತಿಯಲ್ಲಿ ಕ್ಷಿಪ್ರ ವಾಹನ ತಪಾಸಣೆಗಳನ್ನು ಕೈಗೊಳ್ಳಲಾಗಿದೆ.</td>
</tr>
</table>

| | | |
|---|---|---|
| | | ➢ ಅಂತರ್‌ರಾಜ್ಯ ಸಂಪರ್ಕಿಸುವ ಗಡಿಯಲ್ಲಿ ಚೆಕ್ ಪೋಸ್ಟ್‌ಗಳನ್ನು ಪ್ರಾರಂಭಿಸಿದ್ದು, ವಾಹನಗಳನ್ನು ಸಂಶಯಿತ ವ್ಯಕ್ತಿಗಳನ್ನು ಹಾಗೂ ಯಾರು ಶಸ್ತ್ರಾಸ್ತ್ರಗಳನ್ನು ಸಾಗಿಸುವರೊ ಅಂತಹ ವ್ಯಕ್ತಿಗಳನ್ನು ತಪಾಸಣೆ ಮಾಡಲಾಗುತ್ತಿದೆ.<br>➢ ಠಾಣಾ ಗುಪ್ತವಾರ್ತಾ ಸಿಬ್ಬಂದಿಯವರಿಗೆ ಮತ್ತು ಬೀಟ್ ಸಿಬ್ಬಂದಿಯವರಿಗೆ ಸೂಕ್ತ ಸಲಹೆ ಸೂಚನೆಗಳನ್ನು ನೀಡುತ್ತಿದ್ದು, ಇವರಿಂದ ಸೂಕ್ತ ಮಾಹಿತಿಯನ್ನು ಸಂಗ್ರಹಿಸಲಾಗುತ್ತಿದೆ.<br>➢ ಸರಹದ್ದಿನಲ್ಲಿ ನಡೆಯುವ ಎಲ್ಲಾ ಬಂದೋಬಸ್ತುಗಳಿಗೆ ಗರಿಷ್ಠ ಮಟ್ಟದ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ನಿಯೋಜಿಸಲಾಗುತ್ತಿದೆ.<br>➢ ಸುಧಾರಿತ ಗಸ್ತು ಪದ್ಧತಿಯನ್ನು ಜ್ಯಾರಿಗೊಳಿಸಿ ಕ್ರಮ ತೆಗೆದುಕೊಳ್ಳಲಾಗಿದೆ.<br>➢ ಹಗಲು ಮತ್ತು ರಾತ್ರಿ ಗ್ರಾಮ ಗಸ್ತು ಕರ್ತವ್ಯಗಳನ್ನು ಪರಿಣಾಮಕಾರಿಯಾಗಿ ನಿರ್ವಹಿಸಲಾಗುತ್ತಿದೆ.<br>➢ ಕೋಮು ಗಲಭೆ ಹಿನ್ನಲೆಯಲ್ಲಿ ವ್ಯಕ್ತಿಗಳ ಚಲನವಲನಗಳನ್ನು ಗಮನಿಸಲಾಗುತ್ತಿದೆ.<br>➢ ರೌಡಿಗಳು ಮತ್ತು ಮತಿಯ ಗೂಂಡಾಗಳ ಮೇಲೆ ಕಠಿಣ ಕ್ರಮಗಳನ್ನು ಕೈಗೊಳ್ಳಲಾಗಿದ್ದು ಅವರ ಚಟುವಟಿಕೆಯ ಮೇಲೆ ಸೂಕ್ತ ನಿಗಾ ಇರಿಸಲಾಗಿದೆ.<br>➢ ಠಾಣಾ ವ್ಯಾಪ್ತಿಯಲ್ಲಿ ಸಕ್ರಿಯವಾಗಿರುವ ರೌಡಿ ಆಸಾಮಿಗಳ ಮತ್ತು ಮತಿಯ ಗೂಂಡಾಗಳ ಚಲನವಲನಗಳನ್ನು ಹಾಗೂ ಅವರ ಚಟುವಟಿಕೆಯ ಕುರಿತು ಮಾಹಿತಿ ಸಂಗ್ರಹಿಸಿ ಅವರ ವಿರುದ್ಧ ಸಿಆರ್‌ಪಿಸಿ ಪ್ರಕಾರ ಪ್ರಕರಣ ದಾಖಲಿಸಿ ಬಾಂಡ್ ಮುಚ್ಚಳಿಕೆ ಪಡೆಯಲಾಗುತ್ತಿದೆ.<br>➢ ದೈಹಿಕ ಹಲ್ಲೆ ನಡೆಸಿದ, ತನಿಖೆ ಅಥವಾ ನ್ಯಾಯಾಲಯದ ವಿಚಾರಣೆಯಲ್ಲಿರುವ ಪ್ರಕರಣಗಳಲ್ಲಿ ಭಾಗಿಯಾದ ರೌಡಿ ಆಸಾಮಿಗಳ ಮತ್ತು ಮತಿಯ ಗೂಂಡಾಗಳು ಪುನ: ದೈಹಿಕ ಹಲ್ಲೆ ಪ್ರಕರಣದಲ್ಲಿ ಭಾಗಿಯಾದರೆ ಸದರಿ ಆರೋಪಿಗಳು ಈಗಾಗಲೇ ನ್ಯಾಯಾಲಯದಿಂದ ಪಡೆದಿರುವ ಜಾಮೀನು ರದ್ದು ಪಡಿಸಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ.<br>➢ ಕರ್ನಾಟಕ ಪೊಲೀಸ್ ಕಾಯ್ದೆ ಅನ್ವಯ ಗಡಿಪಾರು ಮಾಡಲು ಕ್ರಮವನ್ನು ಕೈಗೊಳ್ಳಲಾಗುತ್ತಿದೆ. |

ಸಂಖ್ಯೆ: ಹೆಚ್‌ಡಿ 18 ಪಿಸಿಇ 2023

(ಆರಗ ಜ್ಞಾನೇಂದ್ರ)
ಗೃಹ ಸಚಿವರು